ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 12 ನೇ ಮಾರ್ಚ್, 2020

ರಸ್ತೆ ವಿಸ್ತರಣೆಗೆ ಸ್ವಾಧೀನ ಪಡಿಸಿಕೊಂಡಿರುವ ಕಟ್ಟಡಗಳ ವಂಚನೆ ಪ್ರಕರಣದ ಬಗ್ಗೆ

ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

111 (709) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಕೆ.ಆರ್. ಪುರ ವಿಧಾನ ಸಭಾ ಕ್ಷೇತ್ರದ ಭಟ್ಟರಹಳ್ಳಿ-ಟಿ.ಸಿ.ಪಾಳ್ಯ ರಸ್ತೆ ವಿಸ್ತರಣೆಗೆ ಸ್ವಾಧೀನಪಡಿಸಿಕೊಳ್ಳದ ಕಟ್ಟಡಗಳು ಹಾಗೂ ಒಂದು ಮಹಡಿಯನ್ನು ಮೂರು ಮಹಡಿ ಕಟ್ಟಡವೆಂದು ತೋರಿಸಿ ಕೆಲವು ರಿಯಲ್ ಎಸ್ಟೇಟ್ ಮಾಫಿಯಾಗಳು 5.65 ಲಕ್ಷ ಚದರಡಿಯಷ್ಟು ಅಭಿವೃದ್ಧಿ ಹಕ್ಕು ಪತ್ರ (ಟಿಡಿಆರ್‌ಸಿ) ನೀಡಿ ಸರ್ಕಾರಕ್ಕೆ ಭಾರಿ ನಷ್ಟ ಉಂಟು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮಹದೇವಪುರ ವಲಯದ ಟಿಡಿಆರ್ಸ್ ಅಧಿಕಾರಿಯಾದ ಸಹಾಯಕ ಕಾರ್ಯಪಾಲಕ ಇಂಜಿನೀಯರ್, ಸಹಾಯಕ ಇಂಜಿನೀಯರ್, ಕಂದಾಯ ಅಧಿಕಾರಿ, ಕಂದಾಯ ನಿರೀಕ್ಷಕರುಗಳ ಮೇಲೆ ದೋಷಾರೋಪ ಪಟ್ಟಿ ಸಲ್ಲಿಕೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಪ್ರಕರಣದಲ್ಲಿ ಟಿಡಿಆರ್ಸ್ ವಂಚನೆಗೆ ಸಂಬಂಧಿಸಿದ ಆರೋಪಿ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ?